# 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಬೇಲೂರು

ಅಸಲು ದಾವಾ ಸಂಖ್ಯೆ: 312/2024

ಪಿ ಡಬ್ಲ್ಯೂ ನಂ: 2

**ಸತ್ಯ ಪ್ರತಿಜ್ಞೆಯ ಮೇರೆಗೆ, ದಿನಾಂಕ: 24-07-2026**

**ಮುಖ್ಯ ವಿಚಾರಣೆ: ವಾದಿ ಪರ ವಕೀಲರಾದ ಶ್ರೀ ಬಿ ಎಂ ರವರಿಂದ**

ಈ ದಾವೆಯಲ್ಲಿ ನಾನು ವಾದಿಪರ ಸಾಕ್ಷಿದಾರನಾಗಿದ್ದು, ನನ್ನ ಪ್ರಾಮಾಣೀಕೃತ ಹೇಳಿಕೆಯನ್ನು ಈ ದಿನ ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದೇನೆ ಮತ್ತು ಅದರಲ್ಲಿ ಹೇಳಿರುವುದೆಲ್ಲಾ ಸತ್ಯವಿದೆ ಎಂದು ಪ್ರಮಾಣೀಕರಿಸುತ್ತೇನೆ. ನಾನು ನಿಪಿ-1 ಕ್ಕೆ ಸಾಕ್ಷಿದಾರನಾಗಿ ಸಹಿ ಮಾಡಿರುತ್ತೇನೆ. ಸಾಕ್ಷಿಯು ನಿಪಿ-1 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಅದನ್ನು ಈಗಾಗಲೇ ನಿಪಿ-1(ಇ) ಎಂದು ಗುರುತಿಸಲಾಗಿದೆ. ನಿಪಿ--1 ಕ್ಕೆ ಮತ್ತೊಬ್ಬ ಸಾಕ್ಷಿದಾರರಾದ ನಂದಕುಮಾರ್, ವಾದಿ ಮತ್ತು ಪ್ರತಿವಾದಿಯರು ಸಹಿ ಮಾಡಿರುತ್ತಾರೆ. ನಾನು ಅವರ ಸಹಿಗಳನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ಸದರಿ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ. ಅದನ್ನು ಈಗಾಗಲೇ ನಿಪಿ-1(ಎ) ರಿಂದ (ಡಿ) ಮತ್ತು (ಎಫ್) ರಿಂದ (ಓ) ಎಂದು ಗುರುತಿಸಲಾಗಿದೆ.

(ಪ್ರತಿವಾದಿ ಏಕತರ್ಫಿ ಇರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಬೇಲೂರು**